ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 142 ಯುಬಿವಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 27.11.2017 28

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560 001.

ಇವರಿಗೆ:
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು.

ಮಾನ್ಯರೆ,

ವಿಷಯ:– 2017–18ನೇ ಶೈಕ್ಷಣಿಕ ಸಾಲಿನಿಂದ ಬೆಂಗಳೂರಿನ ಐ.ಎ.ಎಸ್.ಇ, ಆರ್.ವಿ ಟೀಚರ್ಸ್ ಕಾಲೇಜಿನಲ್ಲಿ ಎಂ.ಇಡಿ. ಕೋರ್ಸ್‌ನ್ನು ಹೊಸದಾಗಿ ಆರಂಭಿಸಲು ಸಂಯೋಜನೆ ನೀಡುವ ಕುರಿತು.

ಉಲ್ಲೇಖ:– 1) ತಮ್ಮ ಪತ್ರ ಸಂಖ್ಯೆ:ಎಸಿಎ–3:ಎ3:ಹೊಕೋಪ್ರ:ಆರ್‌ವಿಟಿಸಿಇ::2016–17 ದಿ:24.06.2016
2) ಸರ್ಕಾರದ ಸಮಸಂಖ್ಯೆಯ ಆದೇಶ, ದಿನಾಂಕ:18.10.2016
3) ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್‌ನ ಆದೇಶ ಸಂಖ್ಯೆ: SRO/ NCTE SRCAPP2016 30113 /M.Ed/ KA/2017-18/92796/92797, ದಿನಾಂಕ:15.06.2017

---

ಬೆಂಗಳೂರು ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ಮಾಡಲಾಗಿದ್ದ ಶಿಫಾರಸ್ಸು ಹಾಗೂ ಈ ಬಗ್ಗೆ ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಪ್ರಾಧಿಕಾರವು ಕೈಗೊಂಡ ನಿರ್ಣಯಗಳನ್ನು ಅನುಸರಿಸಿ ಉಲ್ಲೇಖ (1)ರ ಪತ್ರದಲ್ಲಿ ಸಲ್ಲಿಸಲಾಗಿದ್ದ ಪ್ರಸ್ತಾವನೆಯನ್ನು ಸಂವೀಕ್ಷಿಸಿ, ಬೆಂಗಳೂರಿನ ಐ.ಎ.ಎಸ್.ಇ, ಆರ್.ವಿ ಟೀಚರ್ಸ್ ಕಾಲೇಜಿನಲ್ಲಿ 30 ವಿದ್ಯಾರ್ಥಿ ಪ್ರಮಾಣದೊಂದಿಗೆ ಎಂ.ಇಡಿ. ಸ್ನಾತ್ತಕೋತ್ತರ ಪದವಿ ವ್ಯಾಸಂಗಕ್ರಮವನ್ನು 2016–17ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಉಲ್ಲೇಖ (2)ರ ಆದೇಶದಲ್ಲಿ ಎನ್.ಸಿ.ಟಿ.ಇ ಗೆ ಸರ್ಕಾರದ ನಿರಾಕ್ಷೇಪಣೆಯನ್ನು ತಿಳಿಸಲಾಗಿತ್ತು.

ಸರ್ಕಾರದ ನಿರಾಕ್ಷೇಪಣೆಯ ಆಧಾರದ ಮೇಲೆ ಪರಿಶೀಲಿಸಿ ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತಿನಿಂದ (ಎನ್.ಸಿ.ಟಿ.ಇ) ಜಾರಿಗೊಳಿಸಲಾದ ಉಲ್ಲೇಖ (3)ರ ಆದೇಶದಲ್ಲಿ ಐ.ಎ.ಎಸ್.ಇ, ಆರ್.ವಿ ಟೀಚರ್ಸ್ ಕಾಲೇಜಿನಲ್ಲಿ ಎಂ.ಇಡಿ. ಸ್ನಾತ್ತಕೋತ್ತರ ಪದವಿ ವ್ಯಾಸಂಗಕ್ರಮವನ್ನು 50 ವಿದ್ಯಾರ್ಥಿ ದಾಖಲಾತಿ ಪ್ರಮಾಣವುಳ್ಳ 01 ಘಟಕದ ಮಿತಿಗೊಳಪಟ್ಟು 2017–18ನೇ ಸಾಲಿನಿಂದ ಹೊಸದಾಗಿ ಆರಂಭಿಸುವ ಸಂಬಂಧ ಕೆಲವು ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಟ್ಟು ಮಾನ್ಯತೆ ನೀಡಲಾಗಿದೆ.

ಆದುದರಿಂದ, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್, ಬೆಂಗಳೂರು ವತಿಯಿಂದ 2ನೇ ಬ್ಲಾಕ್, ಜಯನಗರ, ಬೆಂಗಳೂರು–560 011 ಇಲ್ಲಿ ನಡೆಸಲಾಗುತ್ತಿರುವ ಐ.ಎ.ಎಸ್.ಇ, ಆರ್.ವಿ ಟೀಚರ್ಸ್ ಕಾಲೇಜಿನಲ್ಲಿ **ಎಂ.ಇಡಿ. ಸ್ನಾತ್ತಕೋತ್ತರ ಪದವಿ ವ್ಯಾಸಂಗಕ್ರಮವನ್ನು 50 ವಿದ್ಯಾರ್ಥಿ ದಾಖಲಾತಿ ಪ್ರಮಾಣವುಳ್ಳ 01 ಘಟಕದ ಮಿತಿಗೊಳಪಟ್ಟು** 2017–18ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ಎನ್‌ಸಿಟಿಇ ಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದಿಂದ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

**ಷರತ್ತುಗಳು:–**

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

--2

2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7) ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

13/11/17

(ಎಂ.ಎ.ಅಹ್ಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-2)

23/11/17

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಕಾರ್ಯದರ್ಶಿಗಳು, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್, 2ನೇ ಬ್ಲಾಕ್, ಜಯನಗರ, ಬೆಂಗಳೂರು-560 011.
4. ಪ್ರಾಂಶುಪಾಲರು, ಐ.ಎ.ಎಸ್.ಇ, ಆರ್.ವಿ ಟೀಚರ್ಸ್ ಕಾಲೇಜು, 2ನೇ ಬ್ಲಾಕ್, ಜಯನಗರ, ಬೆಂಗಳೂರು-560 011

15/12/17